**All India Radio: Bangalore**
**National Bulletin In Kannada**
**24.07.2025 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**24.07.2025 1.10 p.m.**

**<><><><>**

ಮುಖ್ಯಾಂಶಗಳು

1. ಲೋಕಸಭೆಯಲ್ಲಿ ಪ್ರತಿಪಕ್ಷಗಳ ಗದ್ದಲ ಮುಂದುವರಿಕೆ; ಸದನದ ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಿಕೆ
2. ಯುಕೆ ಪ್ರವಾಸದಲ್ಲಿ ಪ್ರಧಾನಿ ನರೇಂದ್ರ ಮೋದಿ; ಇಂದು ಪ್ರಧಾನಿ ಕೀರ್ ಸ್ಟಾರ್ಮರ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ
3. ಮುಂಬೈ ರೈಲು ಸ್ಫೋಟ ಘಟನೆಯ ೧೨ ಆರೋಪಿಗಳ ಖುಲಾಸೆ ತೀರ್ಪಿಗೆ ಸುಪ್ರೀಂಕೋರ್ಟ್ ತಡೆ
4. ಐದು ವರ್ಷಗಳ ಬಳಿಕ ಚೀನಾ ಪ್ರಜೆಗಳಿಗೆ ಪ್ರವಾಸಿ ವೀಸಾ ವಿತರಣೆ ಇಂದಿನಿಂದ ಪುನಾರಂಭ
5. ಇಂಗ್ಲೆಂಡ್ ವಿರುದ್ಧದ ನಾಲ್ಕನೇ ಕ್ರಿಕೆಟ್ ಟೆಸ್ಟ್; ಭಾರತದಿಂದ ಇಂದು ಎರಡನೇ ದಿನದಾಟ ಮುಂದುವರಿಕೆ

<><><><>

ಹಲವು ವಿಷಯಗಳನ್ನು ಮುಂದಿಟ್ಟುಕೊಂಡು ಪ್ರತಿಪಕ್ಷಗಳ ಸದಸ್ಯರು ಗದ್ದಲ ಹಾಗೂ ಕೋಲಾಹಲ ಉಂಟುಮಾಡಿದ ಹಿನ್ನೆಲೆಯಲ್ಲಿ ಲೋಕಸಭೆಯ ಕಲಾಪವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಗಿದೆ. ಸದನದ ಕಲಾಪ ಬೆಳಗ್ಗೆ ೧೧ ಗಂಟೆಗೆ ಆರಂಭವಾಗುತ್ತಿದ್ದಂತೆಯೇ ಸ್ಪೀಕರ್ ಓಂ ಬಿರ್ಲಾ ಪ್ರಶ್ನೋತ್ತರ ಕಲಾಪವನ್ನು ಕೈಗೆತ್ತಿಕೊಂಡರು. ಆಗ ಪ್ರತಿಪಕ್ಷಗಳ ಸದಸ್ಯರು ಸದನದ ಬಾವಿಗಿಳಿದು ಘೋಷಣೆಗಳನ್ನು ಕೂಗಲಾರಂಭಿಸಿದರು ಅಲ್ಲದೇ, ಬಿಹಾರದಲ್ಲಿ ವಿಶೇಷ ಮತಪಟ್ಟಿ ಪರಿಷ್ಕರಣೆ ವಿಷಯದ ಬಗ್ಗೆ ಚರ್ಚೆಗೆ ಅವಕಾಶ ನೀಡಬೇಕೆಂದು ಪಟ್ಟು ಹಿಡಿದರು. ಓಂ ಬಿರ್ಲಾ ಅವರು ಮೊದಲಿಗೆ ಪ್ರಶ್ನೋತ್ತರ ಕಲಾಪವನ್ನು ಸುಗಮವಾಗಿ ನಡೆಯಲು ಅನುವು ಮಾಡಿಕೊಡಿ ಎಂದು ಮನವಿ ಮಾಡಿದರು. ಅಲ್ಲದೇ ಸದನದಲ್ಲಿ ಭಿತ್ತಿಪತ್ರಗಳನ್ನು ಹಿಡಿದು ಕಲಾಪಕ್ಕೆ

ಅಡ್ಡಿಪಡಿಸುವುದು ಶೋಭೆಯಲ್ಲ, ಸದಸ್ಯರು ತಮ್ಮ ಸ್ಥಾನಗಳಿಗೆ ತೆರಳಿ ಕಲಾಪಕ್ಕೆ ಅವಕಾಶ ಮಾಡಿಕೊಡಬೇಕು. ಪ್ರಶ್ನೋತ್ತರದ ನಂತರ ಸೂಕ್ತ ನಿಯಮಗಳಿಗೆ ವಿಷಯವನ್ನು ಪ್ರಸ್ತಾಪಿಸಿದರೆ ಚರ್ಚೆಗೆ ಅವಕಾಶ ನೀಡಲಾಗುವುದು ಎಂದರು. ಆದರೆ ಗದ್ದಲ ಮುಂದುವರಿದ ಹಿನ್ನೆಲೆಯಲ್ಲಿ ಸ್ಪೀಕರ್ ಸದನದ ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಿದರು.

**ಧ್ವನಿ : ಓಂ ಬಿರ್ಲಾ ೨೫ ಸೆಕೆಂಡ್‌ಗಳು**

<><><><>

ಪ್ರಧಾನಿ ನರೇಂದ್ರ ಮೋದಿ ಇಂದು ಬ್ರಿಟಿಷ್ ಸಹವರ್ತಿ ಕೀರ್ ಸ್ಟಾರ್ಮರ್ ಅವರೊಂದಿಗೆ ದ್ವಿಪಕ್ಷೀಯ ಮಾತುಕತೆ ನಡೆಸಲಿದ್ದಾರೆ. ಎರಡೂ ದೇಶಗಳ ನಡುವಿನ ಕಾರ್ಯತಾಂತ್ರಿಕ ಸಂಬಂಧಗಳಿಗೆ ಹೊಸ ವೇಗವನ್ನು ನೀಡುವತ್ತ ಈ ಮಾತುಕತೆಗಳು ಹೆಚ್ಚಿನ ಗಮನಹರಿಸುವ ನಿರೀಕ್ಷೆಯಿದೆ. ರಕ್ಷಣೆ, ವ್ಯಾಪಾರ ಮತ್ತು ತಂತ್ರಜ್ಞಾನ ಕ್ಷೇತ್ರಗಳಲ್ಲಿ ದ್ವಿಪಕ್ಷೀಯ ಸಂಬಂಧಗಳನ್ನು ವಿಸ್ತರಿಸಲು ಎರಡು ದಿನಗಳ ಭೇಟಿಗಾಗಿ ಪ್ರಧಾನಿ ಮೋದಿ ನಿನ್ನೆ ರಾತ್ರಿ ಯುಕೆಗೆ ಆಗಮಿಸಿದರು. ಭಾರತ-ಯುಕೆ ಮುಕ್ತ ವ್ಯಾಪಾರ ಒಪ್ಪಂದದ -ಎಫ್‌ಟಿಎ ಅಂತಿಮಗೊಳಿಸುವುದು ಅವರ ಭೇಟಿಯ ಪ್ರಮುಖ ಉದ್ದೇಶವಾಗಿದೆ. ವಾಣಿಜ್ಯ ಸಚಿವ ಪಿಯೂಷ್ ಗೋಯಲ್ ಮತ್ತು ಅವರ ಸಹವರ್ತಿ ಜೋನಾಥನ್ ರೆನಾಲ್ಡ್ಸ್ ಇಂದು ಇಬ್ಬರು ಪ್ರಧಾನ ಮಂತ್ರಿಗಳ ಸಮ್ಮುಖದಲ್ಲಿ ಎಫ್‌ಟಿಎಗೆ ಸಹಿ ಹಾಕಲಿದ್ದಾರೆ. ಮೂರು ವರ್ಷಗಳ ಮಾತುಕತೆಗಳ ನಂತರ ಅಂತಿಮಗೊಳಿಸಲ್ಪಟ್ಟ ಈ ವ್ಯಾಪಾರ ಒಪ್ಪಂದವು ಎಲ್ಲಾ ವಲಯಗಳಲ್ಲಿ ಭಾರತೀಯ ಸರಕುಗಳಿಗೆ ಸಮಗ್ರ ಮಾರುಕಟ್ಟೆ ಲಭ್ಯತೆಯನ್ನು ಖಚಿತಪಡಿಸುತ್ತದೆ ಮತ್ತು ವ್ಯಾಪಾರ ಮೌಲ್ಯಗಳ ಸುಮಾರು ಶೇ.೧೦೦ ಪ್ರತಿಶತವನ್ನು ಒಳಗೊಂಡಿರುವ ಸುಮಾರು ಶೇ.೯೯ ಉತ್ಪನ್ನ ವರ್ಗಗಳ ಮೇಲಿನ ಸುಂಕ ವಿನಾಯ್ತಿಯಿಂದ ಭಾರತವು ಲಾಭ ಪಡೆಯುತ್ತದೆ.

**ಈ ಬಗ್ಗೆ ವಿವರ ನಮ್ಮ ಪ್ರತಿನಿಧಿಯಿಂದ ಧ್ವನಿ: ರಾಜೇಶ್ (೫೨ ಸೆಕೆಂಡ್)**

ತಮ್ಮ ಎರಡು ರಾಷ್ಟ್ರಗಳ ಭೇಟಿಯ ಎರಡನೇ ಚರಣದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಅಧ್ಯಕ್ಷ ಮೊಹಮ್ಮದ್ ಮುಯಿಝು ಅವರ ಆಹ್ವಾನದ ಮೇರೆಗೆ ನಾಳೆ ಲಂಡನ್‌ನಿಂದ ಮಾಲ್ಡೀವ್ಸ್‌ಗೆ ಪ್ರಯಾಣಿಸಲಿದ್ದಾರೆ.

<><><><>

೨೦೦೬ರ ಮುಂಬೈ ರೈಲು ಸ್ಫೋಟ ಘಟನೆಯ ಎಲ್ಲಾ ೧೨ ಮಂದಿ ಆರೋಪಿಗಳನ್ನು ಖುಲಾಸೆಗೊಳಿಸಿ ಬಾಂಬೆ ಹೈಕೋರ್ಟ್ ನೀಡಿದ್ದ ಆದೇಶಕ್ಕ ಸುಪ್ರೀಂಕೋರ್ಟ್ ತಡೆಯಾಜ್ಞೆ ನೀಡಿದೆ. ಬಾಂಬೆ ಹೈಕೋರ್ಟ್ ತೀರ್ಪು ಪ್ರಶ್ನಿಸಿ ಮಹಾರಾಷ್ಟ್ರ ಸರ್ಕಾರ ಸಲ್ಲಿಸಿದ್ದ ಕ್ರಿಮಿನಲ್ ಮೇಲ್ಮನವಿಯನ್ನು ಆಲಿಸಿದ ಸುಪ್ರೀಂಕೋರ್ಟ್‌ನ ನ್ಯಾಯಮೂರ್ತಿಗಳಾದ ಎಂ.ಎಂ.ಸುಂದರೇಶ್ ಮತ್ತು  ಎನ್.ಕೆ.ಸಿಂಗ್ ಅವರಿದ್ದ ನ್ಯಾಯಪೀಠ ಪ್ರತಿವಾದಿಗಳಿಗೆ ನೋಟೀಸ್ ಜಾರಿಗೊಳಿಸಿ ತಡೆಯಾಜ್ಞೆ ನೀಡಿತು.

<><><><>

ಐದು ವರ್ಷಗಳ ಬಿಡುವಿನ ನಂತರ ಭಾರತ ಇಂದು ಚೀನಾ ಪ್ರಜೆಗಳಿಗೆ ಪ್ರವಾಸಿ ವೀಸಾ ವಿತರಣೆಯನ್ನು ಪುನರಾಂಭಿಸಲಿದೆ. ಬೀಜಿಂಗ್‌ನಲ್ಲಿನ ಭಾರತದ ರಾಯಭಾರಿ ಕಚೇರಿ ತನ್ನ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಈ ವಿಷಯ ಹಂಚಿಕೊಂಡಿದ್ದು, ಆನ್‌ಲೈನ್ ನಲ್ಲಿ ಅರ್ಜಿ ಸಲ್ಲಿಸುವ ಮೂಲಕ ಚೀನಾ ಪ್ರಜೆಗಳು ಭಾರತದ ಪ್ರವಾಸಿ ವೀಸಾಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ. ಅದರ ಜೊತೆ ಪಾಸ್‌ಪೋರ್ಟ್ ಮತ್ತಿತರ ದಾಖಲೆಗಳನ್ನು ಒದಗಿಸಬಹುದಾಗಿದೆ ಎಂದು ತಿಳಿಸಿದೆ.

**ಧ್ವನಿ : ಸಂಯುಕ್ತಾ, ಪ್ರತಿನಿಧಿ  ( ೪೫ ಸೆಕೆಂಡುಗಳು)**

ಬೀಜಿಂಗ್, ಶಾಂಘೈ ಮತ್ತು ಗ್ವಾಂಗ್ಝೂನಲ್ಲಿರುವ ಭಾರತೀಯ ವೀಸಾ ಕೇಂದ್ರಗಳಿಂದ ವೀಸಾಗಳನ್ನು ಪಡೆದುಕೊಳ್ಳಬಹುದಾಗಿದೆ. ೨೦೨೦ರಲ್ಲಿ ಗಲ್ವಾನ್ ಕಣಿವೆಯಲ್ಲಿ ಪರಿಸ್ಥಿತಿ ಉದ್ವಿಗ್ನಗೊಂಡು ಬಿಕ್ಕಟ್ಟು ಉಂಟಾದ ಹಿನ್ನೆಲೆಯಲ್ಲಿ ಭಾರತ ಪ್ರವಾಸಿ ವೀಸಾ ವಿತರಣೆಯನ್ನು ಸ್ಥಗಿತಗೊಳಿಸಿತ್ತು.

<><><><>

ಭಾರತವು ೨೦೩೦ರವೇಳೆಗೆ ಪೆಟ್ರೋಲ್‌ನಲ್ಲಿ ಶೇಕಡ ೨೦ ರಷ್ಟು ಎಥೆನಾಲ್ ಮಿಶ್ರಣ ಗುರಿಯನ್ನು ಸಾಧಿಸಬೇಕಿತ್ತು, ಆದರೆ ಆ ಗುರಿಯನ್ನು ಐದು ವರ್ಷಗಳ ಮೊದಲೇ ಸಾಧಿಸಲಾಗಿದೆ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್ದೀಪ್ ಸಿಂಗ್ ಪುರಿ ಅವರು ಹೇಳಿದ್ದಾರೆ.

<><><><>

ಕರ್ನಾಟಕದ ಕರಾವಳಿ, ಕೊಂಕಣ, ಗೋವಾ, ಮಧ್ಯ ಮಹಾರಾಷ್ಟ್ರ ಪ್ರದೇಶದಲ್ಲಿ ಇಂದು ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ  ಮುನ್ಸೂಚನೆ ನೀಡಿದೆ. ಅಲ್ಲದೆ, ಆಂಧ್ರಪ್ರದೇಶದ ಕರಾವಳಿ, ಛತ್ತೀಸ್‌ಗಢ, ಪಶ್ಚಿಮ ಬಂಗಾಳ, ಒಡಿಶಾ, ಕರ್ನಾಟಕದ ದಕ್ಷಿಣ ಒಳನಾಡು ಹಾಗೂ ತೆಲಂಗಾಣ ಪ್ರದೇಶಲ್ಲಿ ಇಂದು ವರ್ಷಧಾರೆ ನಿರೀಕ್ಷೆ ಇದೆ ಎಂದು ಐಎಂಡಿ

ಹೇಳಿದೆ. ಈಶಾನ್ಯ ಹಾಗೂ ವಾಯುವ್ಯ ಭಾಗದ ಹಲವು ಪ್ರದೇಶಗಳಲ್ಲಿ ಮುಂದಿನ ೭ ದಿನಗಳ ಕಾಲ ಭಾರೀ ಮಳೆಯಾಗುವ ನಿರೀಕ್ಷೆಯಿದೆ.

<><><><>

ಇಂಗ್ಲೆಂಡ್ ನ ಮ್ಯಾಂಚೆಸ್ಟರ್‌ನ ಓಲ್ಡ್ ಟ್ರಾಫರ್ಡ್‌ನಲ್ಲಿ ನಡೆಯುತ್ತಿರುವ ಆಂಡರ್ಸನ್-ತೆಂಡೂಲ್ಕರ್ ಟ್ರೋಫಿ ಕ್ರಿಕೆಟ್ ಸರಣಿಯ ನಾಲ್ಕನೇ ಟೆಸ್ಟ್ ಪಂದ್ಯದ ಎರಡನೇ ದಿನವಾದ ಇಂದು ಭಾರತ ತನ್ನ ಆಟವನ್ನು ಮುಂದುವರಿಸಲಿದೆ. ಮೊದಲನೇ ದಿನದ ಅಂತ್ಯಕ್ಕೆ ಭಾರತ ೮೩ ಓವರ್‌ಗಳಲ್ಲಿ ೪ ವಿಕೆಟ್‌ಗೆ ೨೬೪ ರನ್ ಗಳಿಸಿತ್ತು. ಶಾರ್ದೂಲ್ ಠಾಕೂರ್ ಮತ್ತು ರವೀಂದ್ರ ಜಡೇಜಾ ಇಬ್ಬರೂ ಔಟಾಗದೆ ಕ್ರೀಸ್‌ನಲ್ಲಿದ್ದಾರೆ. ಭಾರತೀಯ ಕಾಲಮಾನ ಮಧ್ಯಾಹ್ನ ೩:೩೦ ಕ್ಕೆ ಎರಡನೇ ದಿನದಾಟ ಆರಂಭವಾಗಲಿದೆ. ಪ್ರಸ್ತುತ ಐದು ಪಂದ್ಯಗಳ ಸರಣಿಯಲ್ಲಿ ಭಾರತ ತಂಡ ೧-೨ ರಿಂದ ಹಿನ್ನಡೆಯಲ್ಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>